**Akashvani : Bangalore**
**Regional Bulletin In Kannada**
**19.07.2024 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**19.07.2024 / 14.30 hrs**
**<><*<><>*><>**

<u>ಮುಖ್ಯಾಂಶಗಳು</u>

**<><*<><>*><>**

**೧. ರಾಜ್ಯಾದ್ಯಂತ ಮಳೆಯ ಅಬ್ಬರ; ಜನಜೀವನ ಅಸ್ತವ್ಯಸ್ತ - ಹಲವೆಡೆ ಕಾಳಜಿ ಕೇಂದ್ರ ಆರಂಭ- ರಸ್ತೆ ಸಂಚಾರ ಬಂದ್**

**೨. ವಾಲ್ಮೀಕಿ ಅಭಿವೃದ್ಧಿ ನಿಗಮ ವಿಚಾರ ಕುರಿತು ವಿಧಾನಸಭೆಯಲ್ಲಿ ಪ್ರತಿಪಕ್ಷ ಧರಣಿ ಮುಂದುವರಿಕೆ - ಗದ್ದಲದ ನಡುವೆಯೇ ಮೂರು ವಿಧೇಯಕ ಮಂಡನೆ**

**೩. ಅಂಗನವಾಡಿಗಳಲ್ಲಿ ಕಳಪೆ ಆಹಾರ ನೀಡಿಕೆ ಸಮಸ್ಯೆಯನ್ನು ಸರ್ಕಾರ ಗಮನಿಸಬೇಕೆಂದು ವಿಧಾನಪರಿಷತ್ತಿನಲ್ಲಿ ಒತ್ತಾಯ**

**೪. ಬರುವ ಸೋಮವಾರದಿಂದ ಸಂಸತ್ತಿನ ಮುಂಗಾರು ಅಧಿವೇಶನ; ೨೩ರಂದು ಕೇಂದ್ರ ಬಜೆಟ್ ಮಂಡನೆ**

**<><*<><>*><>**

**ರಾಜ್ಯಾದ್ಯಂತ ಸತತ ಧಾರಾಕಾರ ಮಳೆ ಮುಂದುವರೆದಿದ್ದು, ಹಲವು ಜಿಲ್ಲೆಗಳಲ್ಲಿ ಜನಜೀವನ ಅಸ್ತವ್ಯಸ್ತವಾಗಿದೆ, ನದಿಗಳು ಉಕ್ಕಿ ಹರಿಯುತಿವೆ. ಜಲಾಶಯಗಳಿಗೆ ಒಳಹರಿವು ಹೆಚ್ಚುತ್ತಿದ್ದು, ಅವಘಡ ನಿಯಂತ್ರಣದ ಉದ್ದೇಶದಿಂದ ಹೆಚ್ಚುವರಿ ನೀರನ್ನು ನದಿಗಳಿಗೆ ಬಿಡಲಾಗುತ್ತಿದ್ದು, ಸೂಕ್ತ ಜಾಗೃತಿ ವಹಿಸಬೇಕು ಎಂದು ಸ್ಥಳೀಯ ಆಡಳಿತಗಳು ಮತ್ತು ಜನರಿಗೆ ಎಚ್ಚರಿಕೆ ನೀಡಲಾಗುತ್ತಿದೆ. ಹಾವೇರಿ ಜಿಲ್ಲೆಯ ಸವಣೂರು ಮಾದಾಪುರದಲ್ಲಿ ಮನೆಯ ಛಾವಣಿ ಕುಸಿದು ಮೂವರು ಮೃತಪಟ್ಟಿದ್ದು, ಇನ್ನೂ ಮೂವರ ಸ್ಥಿತಿ ಗಂಭೀರವಾಗಿದೆ. ಗಾಯಗೊಂಡವರಿಗೆ ಸೂಕ್ತ ಚಿಕಿತ್ಸೆಗೆ ವ್ಯವಸ್ಥೆ ಮಾಡಲಾಗಿದೆ. ಎನ್‌ಡಿಆರ್‌ಎಫ್ ಮಾರ್ಗಸೂಚಿ ಅನ್ವಯ ಮೃತರ ಕುಟುಂಬಕ್ಕೆ ತಲಾ ಐದು ಲಕ್ಷ ರೂಪಾಯಿ ಪರಿಹಾರ ಘೋಷಿಸಲಾಗಿದೆ. ಮಲೆನಾಡು ಭಾಗದಲ್ಲಿ ಮಳೆಯ ಅಬ್ಬರ ಕಡಿಮೆಯಾಗಿಲ್ಲ, ದಾವಣಗೆರೆ ಜಿಲ್ಲೆಯಲ್ಲಿ ತುಂಗಭದ್ರ ನದಿ ನೀರಿನ ಹರಿವು ಹೆಚ್ಚಳವಾಗಿದ್ದು, ತುಂಗಾ**

ಜಲಾಶಯದಿಂದ ೫೦ ಸಾವಿರ ಕ್ಯೂಸೆಕ್ ಅಧಿಕ ನೀರನ್ನು ಹೊರಬಿಡಲಾಗುತ್ತಿದೆ. ಜಲಾಶಯದ ಹೊರ ಹರಿವು ಇನ್ನೂ ಹೆಚ್ಚಾಗುವ ನಿರೀಕ್ಷೆ ಹಿನ್ನೆಲೆಯಲ್ಲಿ ಹೊನ್ನಾಳಿಯ ಬಾಲರಾಜಘಾಟ್ ಆಸುಪಾಸಿನ ನಿವಾಸಿಗಳಿಗೆ ತಾತ್ಕಾಲಿಕ ಕಾಳಜಿ ಕೇಂದ್ರಕ್ಕೆ ತೆರಳುವಂತೆ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಸೂಚಿಸಿದ್ದಾರೆ. ಹರಿಹರದ ಗಂಗಾನಗರ ಸಮೀಪ ನೀರಿನ ಪ್ರಮಾಣ ಹೆಚ್ಚಳದಿಂದ ಜನಜೀವನ ತೊಂದರೆಗೊಳಗಾಗಿದೆ. ಎಪಿಎಂಸಿ ಭವನದಲ್ಲಿ ಇವರಿಗಾಗಿ ಕಾಳಜಿ ಕೇಂದ್ರ ತೆರೆಯಲಾಗುತ್ತಿದೆ. ವಿಪತ್ತು ನಿರ್ವಹಣಾ ತಂಡವನ್ನು ಸಜ್ಜಾಗಿಡುವಂತೆ ಜಿಲ್ಲಾಧಿಕಾರಿ ಸೂಚಿಸಿದ್ದಾರೆ. ಪಶ್ಚಿಮಘಟ್ಟ ಪ್ರದೇಶದಲ್ಲೂ ವ್ಯಾಪಕ ಮಳೆಯಾಗುತ್ತಿದ್ದು, ಬೆಳಗಾವಿ ಜಿಲ್ಲೆಯಲ್ಲಿ ಒಂದೇ ಸಮನೆ ಜೋರು ಮಳೆಯಾಗುತ್ತಿದೆ. ಖಾನಾಪುರ ತಾಲೂಕಿನಲ್ಲಿ ಶಾಲಾ-ಕಾಲೇಜುಗಳಿಗೆ ಎರಡು ದಿನ ರಜೆ ಘೋಷಿಸಲಾಗಿದೆ. ತಾಲೂಕಿನಲ್ಲಿ ಇದುವರೆಗೆ ೨೮ ಮನೆಗಳಿಗೆ ಹಾನಿಯಾಗಿದೆ. ಮಲಪ್ರಭ ಮತ್ತು ಅದರ ಉಪನದಿಗಳು ಅಪಾಯದ ಮಟ್ಟದಲ್ಲಿ ಹರಿಯುತ್ತಿದೆ. ಬೆಳಗಾವಿ ತಾಲೂಕಿನ ಯಳ್ಳೂರು, ಧಾಮನೆ, ಕೆ.ಕೆ. ಕೊಪ್ಪ ಸೇರಿದಂತೆ ಹಲವು ಗ್ರಾಮಗಳಲ್ಲಿ ಸಾವಿರಾರು ಎಕರೆ ಕೃಷಿ ಭೂಮಿ ಜಲಾವೃತಗೊಂಡಿದೆ.  ಯಾದಗಿರಿ ಜಿಲ್ಲೆಯಲ್ಲಿ ಹುಣಸಗಿ ತಾಲೂಕು ನಾರಾಯಣಪುರ ಗ್ರಾಮದ ಬಸವಸಾಗರ ಜಲಾಶಯದಿಂದ ಕೃಷ್ಣಾ ನದಿಗೆ ಯಾವುದೇ ಕ್ಷಣದಲ್ಲಿ ನೀರು ಹೊರಬಿಡುವ ಸಾಧ್ಯತೆ ಇದ್ದು, ಅಣೆಕಟ್ಟೆಯ ಕೆಳಭಾಗದ ಗ್ರಾಮಗಳ ಜನರು ಮುಂಜಾಗ್ರತೆ ವಹಿಸಬೇಕು ಎಂದು ನಾರಾಯಣಪುರ ಜಲಾಶಯದ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ನದಿ ಪಾತ್ರದಲ್ಲಿ ಯಾವುದೇ ಚಟುವಟಿಕೆ ನಡೆಸಬಾರದು ಎಂದು ಎಚ್ಚರಿಕೆ ನೀಡಲಾಗಿದೆ. ಮಹಾರಾಷ್ಟ್ರದಲ್ಲಿ ಕೃಷ್ಣಾ ನದಿ ಜಲಾನಯನ ಪ್ರದೇಶದಲ್ಲಿ ಅಬ್ಬರದ ಮಳೆಯಾಗುತ್ತಿರುವುದರಿಂದ ಆಲಮಟ್ಟಿ ಜಲಾಶಯಕ್ಕೆ ಭಾರೀ ಪ್ರಮಾಣದಲ್ಲಿ ನೀರು ಹರಿದುಬರುತ್ತಿದೆ. ಕೃಷ್ಣಾ ನದಿಗೆ ನೀರಿನ ಹರಿವು ಹೆಚ್ಚಿಸಿದಲ್ಲಿ ಶೀಲಹಳ್ಳಿ ಮತ್ತು ಹೂವಿನಹೆಡಗಿ ಸೇತುವೆಗಳಲ್ಲಿ ವಾಹನ ಸಂಚಾರ ನಿಲ್ಲಿಸಬೇಕೆಂದು ಅಧಿಕಾರಿಗಳಿಗೆ ಮುನ್ಸೂಚನೆ ನೀಡಲಾಗಿದೆ.  ಉತ್ತರ ಕನ್ನಡ ಜಿಲ್ಲೆಯ ಶಿರೂರಿನಲ್ಲಿ ಗುಡ್ಡ ಕುಸಿದ ಸ್ಥಳದಿಂದ ಮತ್ತೊಂದು ಮೃತ ದೇಹವನ್ನು ಹೊರ ತೆಗೆಯಲಾಗಿದ್ದು, ದುರಂತಕ್ಕೆ ಬಲಿಯಾದವರ ಸಂಖ್ಯೆ ೭ಕ್ಕೆ ಏರಿಕೆಯಾಗಿದೆ. ವಿಪತ್ತು ನಿರ್ವಹಣಾ ಸಿಬ್ಬಂದಿ ಗಂಗಾವಳಿ ನದಿಯಲ್ಲಿ ಶೋಧಕಾರ್ಯ ಮುಂದುವರೆಸಿದ್ದಾರೆ. ಜಿಲ್ಲೆಯ ಎಲ್ಲ ೧೨ ತಾಲೂಕುಗಳಲ್ಲಿ ಶಿಕ್ಷಣ ಸಂಸ್ಥೆಗಳಿಗೆ ಇಂದೂ ಸಹ ರಜೆ ನೀಡಲಾಗಿದೆ. ಒಟ್ಟು ೧೮ ಕಾಳಜಿ ಕೇಂದ್ರಗಳಲ್ಲಿ ಅಂದಾಜು ೨ ಸಾವಿರದ ೫೫ ಸಂತ್ರಸ್ತರು ಆಶ್ರಯ ಪಡೆದಿದ್ದಾರೆ. ಕದ್ರಾ ಜಲಾಶಯದಿಂದ ೬೧ ಸಾವಿರ ಕ್ಯೂಸೆಕ್ ನೀರನ್ನು ಹೊರಬಿಡಲಾಗುತ್ತಿದೆ. ಕಾರವಾರ-ಕೈಗಾ-ಇಳಕಲ್ ರಸ್ತೆಯಲ್ಲಿ ವಾಹನ ಸಂಚಾರವನ್ನು ಬಂದ್ ಮಾಡಲಾಗಿದೆ.

<><*<><>*><>

ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದಿದೆ ಎನ್ನಲಾದ ಅಕ್ರಮ ಹಣ ವರ್ಗಾವಣೆ ವಿಚಾರ ಕುರಿತ ಚರ್ಚೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸಮಂಜಸ ಉತ್ತರ ನೀಡುತ್ತಿಲ್ಲ ಎಂದು ಆರೋಪಿಸಿ ಬಿಜೆಪಿ ಮತ್ತು ಜೆಡಿಎಸ್ ಶಾಸಕರು ಇಂದೂ ಸಹ ವಿಧಾನಸಭೆಯಲ್ಲಿ ಧರಣಿ ಮುಂದುವರೆಸಿದವು. ವಾಲ್ಮೀಕಿ ನಿಗಮದಲ್ಲಿ ದೊಡ್ಡ ಹಗರಣವಾಗಿದೆ. ಹಣ ಲೂಟಿಯಾಗಿದೆ ಎಂದು ಆಡಳಿತ ಪಕ್ಷದ ಸದಸ್ಯರೇ ಧರಣಿಗೆ ಬೆಂಬಲ ನೀಡುತ್ತಿದ್ದಾರೆ. ಅನುದಾನಕ್ಕಾಗಿ ತಮ್ಮದೇ ಸರ್ಕಾರದ ವಿರುದ್ಧ ಪರೋಕ್ಷವಾಗಿ ಗದ್ದಲ ಮಾಡುತ್ತಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದರು. ಧರಣಿನಿರತ ಶಾಸಕರು ಸಭಾಧ್ಯಕ್ಷರ ಪೀಠದ ಎದುರಿನ ಬಾವಿಗೆ ಇಳಿದು ಘೋಷಣೆ ಕೂಗಿದರು. ಸುಗಮ ಕಲಾಪಕ್ಕೆ ಸಹಕರಿಸುವಂತೆ ಸಭಾಧ್ಯಕ್ಷ ಯು.ಟಿ.ಖಾದರ್ ಮಾಡಿದ ಮನವಿಗೆ ಪ್ರತಿಪಕ್ಷ ಶಾಸಕರು ಸ್ಪಂದಿಸದ ಹಿನ್ನೆಲೆಯಲ್ಲಿ ಆರೋಪ-ಪ್ರತ್ಯಾರೋಪಗಳಿಂದ ಗದ್ದಲದ ವಾತಾವರಣ ಉಂಟಾಯಿತು. ಸಭಾಧ್ಯಕ್ಷರು ಕಲಾಪವನ್ನು ೧೦ ನಿಮಿಷ ಮುಂದೂಡಿದರು. ಈ ಎಲ್ಲ ಗದ್ದಲದ ನಡುವೆ ಸದನದಲ್ಲಿ ಸರಕು ಸೇವೆಗಳ ತೆರಿಗೆ ತಿದ್ದುಪಡಿ ವಿಧೇಯಕ, ಕರ್ನಾಟಕ ಸಿನಿ ಸಾಂಸ್ಕೃತಿಕ ಕ್ಷೇಮಾಭಿವೃದ್ಧಿ ವಿಧೇಯಕ ಸೇರಿದಂತೆ ಮೂರು ವಿಧೇಯಕಗಳನ್ನು ಮಂಡಿಸಲಾಯಿತು.

<><*<><>*><>

ವಿಧಾನಸಭೆಯ ಮೊಗಸಾಲೆಗೆ ಆಪ್ತಸಹಾಯಕರನ್ನು ಕರೆತರಬಾರದರು ಎಂದು ಸಭಾಧ್ಯಕ್ಷ ಯು.ಟಿ. ಖಾದರ್ ಶಾಸಕರಿಗೆ ಸೂಚಿಸಿದ್ದಾರೆ. ಅಧಿವೇಶನದ ವೇಳೆ ಮೊಗಸಾಲೆಯಲ್ಲಿ ಜನಸಂದಣಿ ಮತ್ತು ಅನಗತ್ಯ ಗದ್ದಲ ತಪ್ಪಿಸುವ ಉದ್ದೇಶದಿಂದ ಈ ಸೂಚನೆ ನೀಡಲಾಗಿದೆ ಎಂದು ಅವರು ಹೇಳಿದರು. ವಿಧಾನಮಂಡಲದ ಕಲಾಪದ ವೇಳೆ ಊಟ-ಉಪಹಾರ ನಂತರ ವಿಶ್ರಾಂತಿ ಎನ್ನುವ ನೆಪನೀಡಿ ಹಲವು ಶಾಸಕರು ಸದನಕ್ಕೆ ಬರುವುದನ್ನು ತಡ ಮಾಡುತ್ತಿದ್ದಾರೆ. ಇದನ್ನು ತಪ್ಪಿಸಲು ಅಧಿವೇಶನದ ವೇಳೆ ಶಾಸಕರಿಗೆ ವಿಧಾನಸೌಧದ ಮೊಗಸಾಲೆಯಲ್ಲೇ ಭೋಜನ ಮತ್ತು ವಿಶ್ರಾಂತಿಗೆ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಅವರು ಪ್ರಕಟಿಸಿದರು.

<><*<><>*><>

ರಾಜ್ಯಾದ್ಯಂತ ಕೃಷಿ ಹೊಂಡಗಳ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗಿದೆ ಎಂದು ಕೃಷಿ ಸಚಿವ ಚೆಲುವರಾಯಸ್ವಾಮಿ ತಿಳಿಸಿದ್ದಾರೆ. ವಿಧಾನಪರಿಷತ್‌ನಲ್ಲಿ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಅವರು, ಇದುವರೆಗೆ ಒಂದುನೂರ ಆರು ತಾಲೂಕುಗಳಲ್ಲಿ ಮಾತ್ರ ಕೃಷಿ ಹೊಂಡಗಳನ್ನು ನಿರ್ಮಿಸಲಾಗುತ್ತಿತ್ತು. ರಾಜ್ಯದ ಎಲ್ಲ ರೈತರ ಹಿತದೃಷ್ಟಿಯಿಂದ ಇನ್ನು ಮುಂದೆ ನೀರಾವರಿ ಪ್ರದೇಶ ಸೇರಿದಂತೆ ಎಲ್ಲ ಕಡೆ ಕೃಷಿ ಹೊಂಡಗಳನ್ನು ನಿರ್ಮಿಸಲಾಗುವುದು ಎಂದರು. ಹೊಸದಾಗಿ ಕೃಷಿ ಹೊಂಡಗಳನ್ನು ತೆರೆಯುವವರು ಕಡ್ಡಾಯವಾಗಿ ತಂತಿಬೇಲಿ ಅಳವಡಿಸಬೇಕು. ಎಚ್ಚರಿಕೆಯ

ಬೋರ್ಡ್‌ಗಳನ್ನು ಪ್ರದರ್ಶಿಸಬೇಕು. ಕೃಷಿ ಹೊಂಡ ತೆರೆಯುವ ಪರಿಶಿಷ್ಟ ಜಾತಿ ಮತ್ತು ಪಂಗಡದವರಿಗೆ ಶೇಕಡ ೪೦ ರಿಂದ ೫೦ ರಷ್ಟು ಸಬ್ಸಿಡಿ ನೀಡಲಾಗುವುದು ಎಂದು ತಿಳಿಸಿದರು. ಕೃಷಿ ಹೊಂಡಗಳಲ್ಲಿ ನೀರು ಸಂಗ್ರಹಿಸಿ ಮಳೆಯಿಲ್ಲದ ಸಮಯದಲ್ಲಿ ಬಳಸಿಕೊಳ್ಳಲು ಸಾಧ್ಯವಾಗಲಿದೆ ಎಂದು ಸಚಿವ ಚೆಲುವರಾಯಸ್ವಾಮಿ ತಿಳಿಸಿದರು.

<><*<><>*><>

ರಾಜ್ಯದ ಅಂಗನವಾಡಿಗಳಲ್ಲಿ ಮಕ್ಕಳಿಗೆ ಕಳಪೆ ಆಹಾರ ಪೂರೈಕೆಯಾಗುತ್ತಿದೆ. ಸರ್ಕಾರ ಆದ್ಯತೆಯ ಮೇರೆಗೆ ಈ ಬಗ್ಗೆ ಗಮನ ಹರಿಸಬೇಕು ಎಂದು ವಿಧಾನಪರಿಷತ್‌ನಲ್ಲಿ ಇಂದು ಕಳವಳ ವ್ಯಕ್ತಪಡಿಸಲಾಯಿತು. ಪ್ರಶ್ನೋತ್ತರ ಕಲಾಪದ ವೇಳೆ ಸದನದ ಸಭಾಪತಿ ಬಸವರಾಜ ಹೊರಟ್ಟಿ ಸೇರಿದಂತೆ ಪ್ರತಿಪಕ್ಷ ಸದಸ್ಯರು ಮಾತನಾಡಿ, ಅಂಗನವಾಡಿಗಳಲ್ಲಿ ಪುಟ್ಟ ಮಕ್ಕಳಿಗೆ ಅಗ್ಗದ ಮೊಟ್ಟೆ, ಚಿಕ್ಕಿ, ಬಾಳೆಹಣ್ಣು ನೀಡಲಾಗುತ್ತಿದೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಚಿವರು ಈ ಸಮಸ್ಯೆಯನ್ನು ಬಗೆಹರಿಸಬೇಕು ಎಂದು ಒತ್ತಾಯಿಸಿದರು. ಅಂಗನವಾಡಿ ಕೇಂದ್ರಗಳಲ್ಲಿ ಅಹಿತಕರ ಘಟನೆ ನಡೆಯದಂತೆ ಸೂಕ್ತ ನಿಗಾ ಇಡಲಾಗಿದೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದರು. ಸಧ್ಯದಲ್ಲೇ ಅಂಗನವಾಡಿ ಶಿಕ್ಷಕೀಯರ ನೇಮಕಾತಿ ಪ್ರಕ್ರಿಯೆ ಆರಂಭವಾಗಲಿದೆ. ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳನ್ನು ಒಳಗೊಂಡ ಜಿಲ್ಲಾ ಮಟ್ಟದ ಸಮಿತಿಯಲ್ಲಿ ನೇಮಕಾತಿ ನಡೆಯಲಿದೆ. ಇದೇ ಸೋಮವಾರದಿಂದ ಅಂಗನವಾಡಿ ಕೇಂದ್ರಗಳಲ್ಲಿ ಸರ್ಕಾರಿ ಮಾಂಟೆಸರಿ ತರಗತಿಗಳನ್ನು ಆರಂಭಿಸಲಾಗುವುದು ಎಂದು ಸಚಿವರು ತಿಳಿಸಿದರು.

<><*<><>*><>

ಸಂಸತ್ತಿನ ಮುಂಗಾರು ಅಧಿವೇಶನ ಮುಂದಿನ ಸೋಮವಾರ ೨೨ನೇ ತಾರೀಕಿನಿಂದ ಆರಂಭವಾಗಲಿದೆ. ಆಗಸ್ಟ್ ೧೨ರ ವರೆಗೆ ನಡೆಯಲಿರುವ ಕಲಾಪ ಅವಧಿಯಲ್ಲಿ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮಂಗಳವಾರ ೨೩ನೇ ತಾರೀಕಿನಂದು ಕೇಂದ್ರ ಮುಂಗಡಪತ್ರವನ್ನು ಮಂಡಿಸಲಿದ್ದಾರೆ. ಒಟ್ಟು ಆರು ಹೊಸ ಮಸೂದೆಗಳ ಮಂಡನೆಯಾಗಲಿದೆ. ಲೋಕಸಭೆಯ ಕಾರ್ಯದರ್ಶಿ ನಿನ್ನೆ ಸಂಜೆ ಬರಲಿರುವ ಅಧಿವೇಶನದಲ್ಲಿ ಮಂಡನೆಯಾಗಲಿರುವ ಮಸೂದೆಗಳ ಪಟ್ಟಿಯನ್ನು ಪ್ರಕಟಿಸಿದರು. ವಿಪತ್ತು ನಿರ್ವಹಣಾ ಕಾನೂನಿಗೆ ತಿದ್ದುಪಡಿ ಹಣಕಾಸು ಮಸೂದೆ, ನಾಗರಿಕ ವಿಮಾನಯಾನ ಕ್ಷೇತ್ರದಲ್ಲಿ ಸುಲಭವಾಗಿ ವ್ಯಾಪಾರ ಮಾಡಲು ಅನುಕೂಲ ಮಾಡಿಕೊಡುವ ನಿಬಂಧನೆಗಳನ್ನು ಒದಗಿಸಲು ೧೯೩೪ರ ಏರ್‌ಕ್ರಾಫ್ಟ್ ಕಾಯ್ದೆಗೆ ಮಾರ್ಪಾಡು, ಅದರ ಬದಲಿಗೆ ಭಾರತೀಯ ವಾಯುಯಾನ್ ವಿಧೇಯಕ-೨೦೨೪ರ ಮಂಡನೆ ಮಾಡಲಾಗುವುದು ಎಂದು ಅವರು ಮಾಹಿತಿ ನೀಡಿದ್ದಾರೆ. ಈ ನಡುವೆ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರು

ಸಂಸತ್ತಿನ ಕಾರ್ಯಸೂಚಿಯನ್ನು ನಿರ್ಧರಿಸುವ ವ್ಯವಹಾರ ಸಲಹಾ ಸಮಿತಿ ರಚಿಸಿದ್ದು, ಸ್ವತಃ ಅವರೇ ಈ ಸಮಿತಿಯ ಅಧ್ಯಕ್ಷರಾಗಿದ್ದಾರೆ.

<><*<><>*><>

ಸಂಕ್ಷಿಪ್ತ ಸುದಿ

೧. ಎಸ್‌ಸಿಪಿ ಮತ್ತು ಟಿಎಸ್‌ಪಿ ಅನುದಾನವನ್ನು ಎಸ್‌ಸಿ-ಎಸ್‌ಟಿ ಸಮುದಾಯದ ಗ್ಯಾರಂಟಿ ಯೋಜನೆ ಫಲಾನುಭವಿಗಳಿಗೆ ನೇರವಾಗಿ ತಲುಪಿಸಲಾಗುತ್ತಿದೆ. ಒಂದು ರೂಪಾಯಿ ಕೂಡ ಬೇರೆ ಉದ್ದೇಶಗಳಿಗೆ ಬಳಕೆಯಾಗುತ್ತಿಲ್ಲ. ಪ್ರತಿಪಕ್ಷಗಳ ಆರೋಪದಲ್ಲಿ ಹುರುಳಿಲ್ಲ. ಸಾಮಾಜಿಕ ನ್ಯಾಯದ ವಿಚಾರದಲ್ಲಿ ತಮ್ಮ ಬದ್ಧತೆ ಪ್ರಶ್ನಾತೀತ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದಾರೆ.

೨. ಪ್ರಧಾನಮಂತ್ರಿ ನರೇಂದ್ರ ಮೋದಿ ಈ ತಿಂಗಳ ೨೮ ರಂದು ಆಕಾಶವಾಣಿಯಲ್ಲಿ ತಮ್ಮ ಮನ್ ಕಿ ಬಾತ್ ಕಾರ್ಯಕ್ರಮವನ್ನು ಪ್ರಸ್ತುತಪಡಿಸಲಿದ್ದಾರೆ. ಈ ಕಾರ್ಯಕ್ರಮಕ್ಕಾಗಿ ಸಾರ್ವಜನಿಕರು ತಮ್ಮ ವಿಚಾರಗಳನ್ನು ಮೈ ಗೌ ಅಥವಾ ನಮೋ ಆಪ್‌ಗಳಲ್ಲಿ ವಿನಿಯಮ ಮಾಡಿಕೊಳ್ಳಬೇಕು ಎಂದು ಅವರು ಮನವಿ ಮಾಡಿದ್ದಾರೆ.

೩. ದಾವಣಗೆರೆ ಜಿಲ್ಲೆಯಲ್ಲಿ ಪ್ರಸಕ್ತ ಮುಂಗಾರು ಹಂಗಾಮಿಗೆ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ವಿಮಾ ಯೋಜನೆಯನ್ನು ಜಾರಿಗೊಳಿಸಲಾಗಿದ್ದು, ಅಧಿಸೂಚಿತ ಬೆಳೆಗಳಿಗೆ ರೈತರು ನೋಂದಾಯಿಸಿಕೊಳ್ಳಬಹುದು ಎಂದು ಜಿಲ್ಲಾ ಕೃಷಿ ಇಲಾಖೆ ಸೂಚಿಸಿದೆ. ಆಸಕ್ತರು ಸಮೀಪದ ಬ್ಯಾಂಕ್‌ಗಳು ಅಥವಾ ಸಾಮಾನ್ಯ ಸೇವಾ ಕೇಂದ್ರಗಳನ್ನು ಸಂಪರ್ಕಿಸಬಹುದು ಎಂದು ತಿಳಿಸಲಾಗಿದೆ.

೪. ಚಿಕ್ಕಬಳ್ಳಾಪುರ ತಾಲೂಕು ಅಜ್ಜವಾರ ಗ್ರಾಮ ಪಂಚಾಯಿತಿಯ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಗಳಿಗೆ ಇಂದು ಚುನಾವಣೆ ನಡೆಯಿತು. ಅಧ್ಯಕ್ಷರಾಗಿ ನಾಯನಹಳ್ಳಿ ಗ್ರಾಮದ ಸದಸ್ಯ ಶಿವಪ್ಪ ಹಾಗೂ ಉಪಾಧ್ಯಕ್ಷರಾಗಿ ನುಗಿತಹಳ್ಳಿ ಗ್ರಾಮದ ಸದಸ್ಯ ಮಂಜುನಾಥ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.